ಸರ್ಕಾರಿ ಪ್ರೌಢ ಶಾಲೆಗಳಿಗೆ ಮೂಲಭೂತ ಸೌಕರ್ಯ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 135 (134)

ಸದಸ್ಯರ ಹೆಸರು : ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕಹಳ್ಳಿ ಕ್ಷೇತ್ರ)

ಉತ್ತರಿಸುವ ಸಚಿವರು : ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಪ್ರಶ್ನೆಗಳು:

ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಯಾವ ಯಾವ ಪ್ರೌಢಶಾಲೆಗಳಲ್ಲಿ ಕೊಠಡಿಗಳು ಮತ್ತು ಶೌಚಾಲಯಗಳ ಕೊರತೆ ಇದೆ? (ಮಾಹಿತಿ ನೀಡುವುದು)

ಆ) ಕೊಠಡಿಗಳು ಮತ್ತು ಶೌಚಾಲಯಗಳ ನಿರ್ಮಾಣಕ್ಕೆ ಸರ್ಕಾರ ಯಾವ ಯೋಜನೆಯನ್ನು ರೂಪಿಸಿದೆ (ಮಾಹಿತಿ ನೀಡುವುದು);

ಇ) ಈ ಸಾಲಿನ ಬಜೆಟ್‌ನಲ್ಲಿ ಅನುದಾನ ನೀಡಿ, ಎಲ್ಲಾ ಪ್ರೌಢ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುವುದೇ?

ಉತ್ತರಗಳು:

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಯಾವ ಪ್ರೌಢಶಾಲೆಯಲ್ಲಿಯೂ ಕೊಠಡಿಗಳ ಕೊರತೆ ಮತ್ತು ಶೌಚಾಲಯದ ಕೊರತೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.